# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಬಿ.ಬಿ.ಆನವಟ್ಟಿ, ಹಿಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 518 ಗ್ರಾಪಂಕಾ 2014, ದಿನಾಂಕ 17.11.2014
2) ಮಾನ್ಯ ಉಪಲೋಕಾಯುಕ್ತ ರವರ ವರದಿ ಸಂಖ್ಯೆ: LOK/ARE-5/ENQ-617/2014, ದಿನಾಂಕ: 26.10.2016
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 21.11.2016 ಮತ್ತು 15.02.2017
4) ಮಾನ್ಯ ಉಪಲೋಕಾಯುಕ್ತ ರವರ ಪರಿಷ್ಕೃತ ವರದಿ ಸಂಖ್ಯೆ: LOK/ARE-5/ENQ-617/2014, ದಿನಾಂಕ: 04.02.2017
5) ಶ್ರೀ ಬಿ.ಬಿ.ಆನವಟ್ಟಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಸಲ್ಲಿಸಿರುವ ಉತ್ತರ, ದಿನಾಂಕ 24.12.2016 ಮತ್ತು 07.03.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಶ್ರೀ ಬಿ.ಬಿ.ಆನವಟ್ಟಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ)ನಿಯಮಾವಳಿಗಳು 1957 ರ ನಿಯಮ 14(ಎ) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ವಹಿಸಲಾಗಿತ್ತು. ಅದರಂತೆ ಅಪರ ನಿಬಂಧಕರು ವಿಚಾರಣೆಗಳು-11 ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

The DGO Sri B.B.Anavatti – the then Secretary of Masur Grama Panchayath in Hirekerur Taluk, Haveri District while working in the said capacity, one Sri.Mohan Dundeppa Nannuri r/o Masur Village in Hirekerur Taluk of Haveri District has filed a complaint alleging that on behalf of Masuru Grama Panchayat a protection wall was constructed to kumudwathi river and through one Sri Manoharaswamy Budihal Math, member of Masuru Grama Panchayat and his son Sri Jagadish Budihal Math have illegally demolished the said protection wall but the DGO has not taken any action for preventing the said illegal demolition of the protection wall by those persons; thereby, DGO being the government servant has failed to maintain absolute integrity and devotion to duty, and caused dereliction of duty and acted in a manner of unbecoming of a Government Servant and thereby committed official misconduct as enumerated u/s 3(1)(i) to (iii) of Karnataka Civil Services (conduct) Rules 1966.

ಮೇಲೆ ಓದಲಾದ (2) ರಲ್ಲಿ, ಪ್ರಕರಣದ ಸಂಬಂಧ ವಿಚಾರಣೆ ನಡೆಸಿ ವಿಚಾರಾಧಿಕಾರಿಯವರು ಸಲ್ಲಿಸಿದ ವರದಿಯಲ್ಲಿ ಸದರಿ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವುದಾಗಿ ತಿಳಿಸಿರುವ ಹಿನ್ನೆಲೆಯಲ್ಲಿ, ಶ್ರೀ ಬಿ.ಬಿ.ಆನವಟ್ಟಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಗೆ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ" ದಂಡನೆಯನ್ನು ವಿಧಿಸಲು ಮಾನ್ಯ ಉಪಲೋಕಾಯುಕ್ತರವರ ದಿನಾಂಕ: 26.10.2016 ರ ಶಿಫಾರಸ್ಸು ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಸದರಿ ನೌಕರರು ದಿನಾಂಕ 29.02.2016 ರಂದು ನಿವೃತ್ತಿ ಹೊಂದಿರುವ ಹಿನ್ನೆಲೆಯಲ್ಲಿ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಸದರಿ ನಿವೃತ್ತ ನೌಕರರ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ನಿಯಮಗಳಲ್ಲಿ ಅವಕಾಶವಿಲ್ಲದಿರುವುದರಿಂದ ಕರ್ನಾಟಕ ನಾಗರಿಕ ಸೇವಾ ನಿಯಮ 214 ರನ್ವಯ ಪರಿಷ್ಕೃತ ದಂಡನೆ ವಿಧಿಸುವ ಬಗ್ಗೆ ಲೋಕಾಯುಕ್ತ ಸಂಸ್ಥೆಯನ್ನು ದಿನಾಂಕ 21.01.2017 ರ ಸರ್ಕಾರದ ಪತ್ರದಲ್ಲಿ ಕೋರಲಾಗಿತ್ತು.

ಮೇಲೆ ಓದಲಾದ (4) ರಲ್ಲಿ ಮಾನ್ಯ ಉಪಲೋಕಾಯುಕ್ತರು ದಿನಾಂಕ 04.02.2017 ರ ಪರಿಷ್ಕೃತ ಶಿಫಾರಸ್ಸಿನಲ್ಲಿ "ಸದರಿ ನೌಕರರಿಗೆ ದೊರಕುವ ಪಿಂಚಣಿಯಲ್ಲಿ ಶೇ.10 ರಷ್ಟು ಮೊತ್ತವನ್ನು ಎರಡು ವರ್ಷಗಳ ಅವಧಿಗೆ ತಡೆ ಹಿಡಿಯುವ" ದಂಡನಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ನಿಯಮಾನುಸಾರ ಆರೋಪಿತ ನೌಕರರಿಗೆ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು ಈ ನೋಟಿಸಿಗೆ ಸದರಿ ನೌಕರರು ಮೇಲೆ ಓದಲಾದ (5) ರಲ್ಲಿ ಕೆಳಗಿನಂತೆ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

> "ಸದರಿಯವರು ಮಾಸೂರು ಗ್ರಾಮ ಪಂಚಾಯತಿಯಲ್ಲಿ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಶ್ರೀ ಮನೋಹನ ಸ್ವಾಮಿ ಬೂದಿಹಾಳಮಠ ಇವರು ಗ್ರಾಮ ಪಂಚಾಯತಿ ವತಿಯಿಂದ ಕುಮುದ್ವತಿ ನದಿಗೆ ನಿರ್ಮಿಸಿದ ತಡೆಗೋಡೆಯನ್ನು ಜಖಂಗೊಳಿಸಿದ್ದನ್ನು ಮರುನಿರ್ಮಾಣ ಮಾಡಿಸಿ, ಸರ್ಕಾರಕ್ಕೆ ಉಂಟಾದ ಆರ್ಥಿಕ ನಷ್ಟವನ್ನು ಆರೋಪಿತ ವ್ಯಕ್ತಿಯಿಂದ ಸರಿಪಡಿಸಿ ಈ ಬಗ್ಗೆ ಲೋಕಾಯುಕ್ತ ಸಂಸ್ಥೆಗೆ ವರದಿ ನೀಡಲಾಗಿದ್ದು, ದೂರುದಾರರಿಗೂ ಮನವರಿಕೆ ಮಾಡಲಾಗಿದೆ. ಆದುದರಿಂದ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸಿನಂತೆ ದಂಡನೆಯನ್ನು ವಿಧಿಸದಿರಲು ಮನವಿ ಮಾಡಿರುತ್ತಾರೆ."

ಸರ್ಕಾರವು ಪರಿಶೀಲಿಸಿ, ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸಿನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧ ಪಟ್ಟಂತೆ ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿದೆ. ಆದುದರಿಂದ ಆಪಾದಿತರ ಆಕ್ಷೇಪಣೆಗಳು ಸಮಂಜಸವಾಗಿ ಇರುವುದಿಲ್ಲವಾದ್ದರಿಂದ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಶ್ರೀ ಬಿ.ಬಿ.ಆನವಟ್ಟಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಗೆ "ಸದರಿ ನೌಕರರಿಗೆ ದೊರಕುವ ಪಿಂಚಣಿಯಲ್ಲಿ ಶೇ.10 ರಷ್ಟು ಮೊತ್ತವನ್ನು ಎರಡು ವರ್ಷಗಳ ಅವಧಿಗೆ ತಡೆ ಹಿಡಿಯುವ" ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 765 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 11.10.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಬಿ.ಬಿ.ಆನವಟ್ಟಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(1)ಎ ರನ್ವಯ "ಸದರಿ ನೌಕರರಿಗೆ ದೊರಕುವ ಪಿಂಚಣಿಯಲ್ಲಿ ಶೇ.10 ರಷ್ಟು ಮೊತ್ತವನ್ನು ಎರಡು ವರ್ಷಗಳ ಅವಧಿಗೆ ತಡೆ ಹಿಡಿಯುವ" ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5) ಕಾರ್ಯನಿರ್ವಾಹಕ ಅಧಿಕಾರಿ, ಹಿರೇಕೆರೂರು ತಾಲ್ಲೂಕು ಪಂಚಾಯತಿ, ಹಿರೇಕೆರೂರು, ಹಾವೇರಿ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
6) ಶ್ರೀ ಬಿ.ಬಿ.ಆನವಟ್ಟಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ
7) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.